# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 510 (513)
ಮಾನ್ಯ ಸದಸ್ಯರ ಹೆಸರು : ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 16/09/2021
ಉತ್ತರಿಸುವವರು : ಮಾನ್ಯ ಕಾರ್ಮಿಕ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ). | ರಾಜ್ಯದಲ್ಲಿ ಕಾರ್ಮಿಕ ಇಲಾಖೆಯಿಂದ ಪ್ರಸ್ತುತ ಜಾರಿ ಮಾಡಲಾಗುತ್ತಿರುವ ರಾಜ್ಯ ಸರ್ಕಾರದ ಯೋಜನೆಗಳು ಯಾವುವು: | ರಾಜ್ಯದಲ್ಲಿ ಕಾರ್ಮಿಕ ಇಲಾಖೆಯಿಂದ ಪ್ರಸ್ತುತ ಜಾರಿ ಮಾಡಲಾಗುತ್ತಿರುವ ರಾಜ್ಯ ಸರ್ಕಾರದ ಯೋಜನೆಗಳ ವಿವರಗಳನ್ನು ಈ ಕೆಳಕಂಡಂತೆ ಒದಗಿಸಲಾಗಿದೆ.<br>1. **ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:-**<br>ಮಂಡಳಿಯ ನೋಂದಾಯಿತ ಫಲಾನುಭವಿಗಳಿಗೆ ಮತ್ತು ಅವರ ಅವಲಂಭಿತರಿಗೆ 19 ರೀತಿಯ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ನೀಡಲಾಗುತ್ತಿದ್ದು ವಿವರಗಳನ್ನು ಅನುಬಂಧ-1ರಲ್ಲಿ ಸಲ್ಲಿಸಿದೆ.<br>2. **ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:-**<br>ರಾಜ್ಯ ಸರ್ಕಾರವು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಮೂಲಕ ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸಲು **ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ** ಹಾಗೂ **ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ**ಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br>3. **ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:-**<br>ಕಾರ್ಮಿಕ ಇಲಾಖೆಯ ಅಧೀನದಲ್ಲಿರುವ ಕಾರ್ಮಿಕ ಕಲ್ಯಾಣ ಮಂಡಳಿಯು ಒಂದು ಸ್ವಾಯುತ್ತ ಸಂಸ್ಥೆಯಾಗಿದ್ದು, ಮಂಡಳಿಗೆ 20:40 ರ ಅನುಪಾತದಲ್ಲಿ ವಂತಿಗೆ ಪಾವತಿಸುವ ಸಂಘಟಿತ ಕಾರ್ಮಿಕರು ಮತ್ತು ಅವರ ಕುಟುಂಬ ಅವಲಂಬಿತರಿಗಾಗಿ ಕೆಲವು ಕಲ್ಯಾಣ ಯೋಜನೆಗಳನ್ನು ರೂಪಿಸಲಾಗಿದೆ. ಈ ಯೋಜನೆಗಳಡಿ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ. |

| | | |
|---|---|---|
| | | 1) ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ<br>2) ಕಾರ್ಮಿಕರಿಗೆ ವೈದ್ಯಕೀಯ ನೆರವು<br>3) ಕಾರ್ಮಿಕರಿಗೆ ಅಪಘಾತ ಧನ ಸಹಾಯ<br>4) ಹೆರಿಗೆ ಭತ್ಯೆ ಸೌಲಭ್ಯ<br>5) ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ<br>6) ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ಸಂಸ್ಥೆಗಳಿಗೆ ಧನಸಹಾಯ<br>ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ |
| ಆ) | ಕಳೆದ ಮೂರು ವರ್ಷಗಳಿಂದ ರಾಮನಗರ ಜಿಲ್ಲೆಯಲ್ಲಿ ಅಂತಹ ಯೋಜನೆಗಳನ್ನು ಫಲಾನುಭವಿಗಳಿಗೆ ಕಲ್ಪಸಲಾಗಿದೆಯೇ; (ತಾಲ್ಲೂಕುವಾರು ವಿವರ ನೀಡುವುದು) | 1. <u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:-</u><br>ಕಳೆದ ಮೂರು ವರ್ಷಗಳಂದ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳಡಿ ರಾಮನಗರ ಜಿಲ್ಲೆಯ ಫಲಾನುಭವಿಗಳಗೆ ಮಂಡಳ ವತಿಯಿಂದ ವಿತರಿಸಿದ ತಾಲ್ಲೂಕುವಾರು ವಿವರವನ್ನು ಅನುಬಂಧ-2 ರಲ್ಲಿ ಸಲ್ಲಿಸಿದೆ.<br><br>2. <u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:-</u><br>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಕಳೆದ ಮೂರು ವರ್ಷಗಳಿಂದ ರಾಮನಗರ ಜಿಲ್ಲೆಯಲ್ಲಿ ಸೌಲಭ್ಯ ಪಡೆದ ಅಸಂಘಟಿತ ಕಾರ್ಮಿಕರ ಯೋಜನಾವಾರು ವಿವರಗಳು ಈ ಕೆಳಕಂಡಂತಿದೆ.<br><br>1. **ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:**<br><br>ಈ ಯೋಜನೆಯಡಿ ಸಾರಿಗೆ ಇಲಾಖೆಯಿಂದ ಕರ್ನಾಟಕ ರಾಜ್ಯದಲ್ಲಿ ಊರ್ಜಿತ ವಾಣಿಜ್ಯ ಸಾರಿಗೆ ವಾಹನ ಚಾಲನಾ ಪರವಾನಗಿ ಪಡೆದ ಮೃತ ಚಾಲಕರಿಗೆ ಅಪಘಾತ ಪರಿಹಾರ ಸೌಲಭ್ಯವನ್ನು ವಿತರಿಸಲಾಗುತ್ತಿದ್ದು, ತಾಲ್ಲೂಕುವಾರು ವಿವರ ಈ ಕೆಳಗಿನಂತಿದೆ: |

| ರಾಮನಗರ ಜಿಲ್ಲೆ | | |
|---|---|---|
| ತಾಲ್ಲೂಕು | ಒಟ್ಟು ಪ್ರಕರಣ | ಒಟ್ಟು ಪರಿಹಾರದ ಮೊತ್ತ |
| ಚನ್ನಪಟ್ಟಣ | 5 | 25,00,000 |
| ಕನಕಪುರ | 11 | 50,50,000 |
| ಮಾಗಡಿ | 3 | 15,00,000 |
| ರಾಮನಗರ | 3 | 15,00,000 |
| ಒಟ್ಟು | **22** | **10,55,0000** |

2. ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:

ಈ ಯೋಜನೆಯಡಿ ರಾಮನಗರ ಜಿಲ್ಲೆಯಲ್ಲಿ ಪ್ರಸ್ತುತ 11 ವರ್ಗಗಳ ಕಾರ್ಮಿಕರಾದ ಹಮಾಲರು, ಗೃಹಕಾರ್ಮಿಕರು, ಚಿಂದಿ ಆಯುವವರು, ಟೈಲರ್‌ಗಳು, ಮೆಕ್ಯಾನಿಕ್ಸ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ ವೃತ್ತಿಯ 1,887 ಅಸಂಘಟಿತ ಕಾರ್ಮಿಕರನ್ನು ನೋಂದಾಯಿಸಲಾಗಿದ್ದು, ತಾಲ್ಲೂಕುವಾರು ವಿವರ ಈ ಕೆಳಕಂಡಂತಿದೆ.

| ರಾಮನಗರ ಜಿಲ್ಲೆ | | |
|---|---|---|
| ಕ್ರಮ ಸಂಖ್ಯೆ | ತಾಲ್ಲೂಕು | ನೋಂದಾಯಿತರ ಸಂಖ್ಯೆ |
| 1. | ಚನ್ನಪಟ್ಟಣ | 679 |
| 2. | ಕನಕಪುರ | 290 |
| 3. | ಮಾಗಡಿ | 227 |
| 4. | ರಾಮನಗರ | 691 |
| ಒಟ್ಟು | | 1,887 |

3. <u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:-</u>

ಕಳೆದ ಮೂರು ವರ್ಷಗಳಲ್ಲಿ ರಾಮನಗರ ಜಿಲ್ಲೆಯಲ್ಲಿ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯಿಂದ ವಿವಿಧ ಕಲ್ಯಾಣ ಯೋಜನೆಗಳಡಿಯಲ್ಲಿ ಧನ ಸಹಾಯ ನೀಡಲಾಗಿದೆ. ವಿವರಗಳು ಈ ಕೆಳಕಂಡಂತಿದೆ.

| ವರ್ಷ | ಫಲಾನುಭವಿಗಳು | ಮೊತ್ತ |
|---|---|---|
| 2018-19 | 659 | 25,74,000 |
| 2019-20 | 912 | 34,07,000 |
| 2020-21 | 221 | 9,37,000 |

ತಾಲ್ಲೂಕುವಾರು ವಿವರಗಳು ಲಭ್ಯವಿರುವುದಿಲ್ಲ.

| | | |
|---|---|---|
| ಇ) | ರಾಮನಗರ ಜಿಲ್ಲೆಯಲ್ಲಿ ಕಾರ್ಮಿಕ ಇಲಾಖೆಯಲ್ಲಿ ಯಾರು ಯಾರು ಸಂಘಟಿತ ಮತ್ತು ಅಸಂಘಟಿತ ವಲಯದಲ್ಲಿ ತಮ್ಮ ಹೆಸರನ್ನು ನೋಂದಾಯಿಸಿದ್ದಾರೆ; (ತಾಲ್ಲೂಕುವಾರು ವಿವರ ನೀಡುವುದು) | 1. <u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:-</u><br>ರಾಮನಗರ ಜಿಲ್ಲೆಯಲ್ಲಿ ಒಟ್ಟು 57,541 ಅಸಂಘಟಿತ ವಲಯಕ್ಕೆ ಸೇರಿದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಮಂಡಳಿಯ ಫಲಾನುಭವಿಗಳಾಗಿ ನೋಂದಣಿಯಾಗಿರುತ್ತಾರೆ. |

ತಾಲ್ಲೂಕುವಾರು ವಿವರ ಈ ಕೆಳಕಂಡಂತ್ತಿರುತ್ತದೆ.

| ಕ್ರಮ ಸಂಖ್ಯೆ | ತಾಲ್ಲೂಕು | ನೋಂದಾಯಿತ ಫಲಾನುಭವಿಗಳ ವಿವರ |
|---|---|---|
| 01 | ರಾಮನಗರ | 14702 |
| 02 | ಚನ್ನಪಟ್ಟಣ | 13646 |
| 03 | ಕನಕಪುರ | 20947 |
| 04 | ಮಾಗಡಿ | 8246 |
| ಒಟ್ಟು | | 57541 |

2. **ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:-**

ಈ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಕಳೆದ ಮೂರು ವರ್ಷಗಳಿಂದ ರಾಮನಗರ ಜಿಲ್ಲೆಯಲ್ಲಿ ಸೌಲಭ್ಯ ಪಡೆದ ಅಸಂಘಟಿತ ಕಾರ್ಮಿಕರ ಯೋಜನಾವಾರು ವಿವರಗಳು ಈ ಕೆಳಕಂಡಂತಿದೆ.

1. **ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:**

ಸಾರಿಗೆ ಇಲಾಖೆಯು ಒದಗಿಸಿರುವ ದತ್ತಾಂಶದ ಪ್ರಕಾರ ರಾಜ್ಯದಲ್ಲಿ ಊರ್ಜಿತ ಖಾಸಗಿ ವಾಣಿಜ್ಯ ಸಾರಿಗೆ ವಾಹನ ಚಾಲನಾ ಪರವಾನಗಿ ಹೊಂದಿರುವ 9,12,100 ಚಾಲಕರಿದ್ದು, ಅದರಲ್ಲಿ ಸರ್ಕಾರಿ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಚಾಲಕರನ್ನು ಹೊರತುಪಡಿಸಿ ಉಳಿದ 8,40,561 ಚಾಲಕರನ್ನು ಈ ಯೋಜನೆಯಡಿ ಫಲಾನುಭವಿಗಳೆಂದು ಪರಿಗಣಿಸಲಾಗಿದೆ. ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ದತ್ತಾಂಶದನ್ವಯ ರಾಮನಗರ ಜಿಲ್ಲೆಯಲ್ಲಿ ಒಟ್ಟು 15,903 ಚಾಲಕರನ್ನು ಈ ಯೋಜನೆಯಡಿ ಫಲಾನುಭವಿಗಳೆಂದು ಪರಿಗಣಿಸಲಾಗಿದೆ. ಕಳೆದ ಮೂರು ವರ್ಷಗಳಲ್ಲಿ ಸದರಿ ಯೋಜನೆಯಡಿ ಪರಿಹಾರ ಪಡೆದ ಫಲಾನುಭವಿಗಳ ತಾಲ್ಲೂಕುವಾರು ವಿವರವನ್ನು **ಅನುಬಂಧ-3**ರಲ್ಲಿ ಒದಗಿಸಿದೆ.

3. **ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:**

ಈ ಯೋಜನೆಯಡಿ ರಾಮನಗರ ಜಿಲ್ಲೆಯಲ್ಲಿ ಪ್ರಸ್ತುತ 11 ವರ್ಗಗಳ ಕಾರ್ಮಿಕರಾದ ಹಮಾಲರು, ಗೃಹಕಾರ್ಮಿಕರು, ಚಿಂದಿ ಆಯುವವರು, ಟೈಲರ್‌ಗಳು, ಮೆಕ್ಯಾನಿಕ್ಸ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ ವೃತ್ತಿಯ 1,887 ಅಸಂಘಟಿತ ಕಾರ್ಮಿಕರನ್ನು ನೋಂದಾಯಿಸಲಾಗಿದೆ. (ತಾಲ್ಲೂಕುವಾರು ಸಂಪೂರ್ಣ ಮಾಹಿತಿ **ಅನುಬಂಧ-2**ರಲ್ಲಿ ಒದಗಿಸಿದೆ).

3. **ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:-**

ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ಕಾರ್ಮಿಕರ ನೋಂದಣಿ ವ್ಯವಸ್ಥೆ ಇರುವುದಿಲ್ಲ. ಆದರೆ ಮಂಡಳಿಗೆ 20:40 ರ ಅನುಪಾತದಲ್ಲಿ ವಂತಿಗೆ ಪಾವತಿಸುವ ಸಂಘಟಿತ ಕಾರ್ಮಿಕರು ಮಂಡಳಿಯ ವ್ಯಾಪ್ತಿಗೆ ಒಳಪಡುತ್ತಾರೆ. ರಾಮನಗರ ಜಿಲ್ಲೆಯಲ್ಲಿ ಒಟ್ಟು 40624 ಸಂಘಟಿತ ಕಾರ್ಮಿಕರಿದ್ದಾರೆ.

**ಈ)** ಸದರಿ ಸಂಘಟಿತ ಮತ್ತು ಅಸಂಘಟಿತ ವಲಯದ ನೋಂದಾಯಿತ ಕಾರ್ಮಿಕರಿಗೆ ಸರ್ಕಾರಿ ಸೌಲಭ್ಯ ನೀಡಲಾಗಿದೆಯೇ/ಸದರಿಯವರಿಗೆ ನೀಡುವ ಸೌಲಭ್ಯಗಳು ಯಾವುವು; ನೀಡಿದಲ್ಲಿ, ಅವುಗಳ ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು?

1. **ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:-**

ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳಡಿ ರಾಮನಗರ ಜಿಲ್ಲೆಯ ಫಲಾನುಭವಿಗಳಿಗೆ ಮಂಡಳಿ ವತಿಯಿಂದ ವಿತರಿಸಿದ ತಾಲ್ಲೂಕುವಾರು ವಿವರವನ್ನು **ಅನುಬಂಧ-4** ರಲ್ಲಿ ಸಲ್ಲಿಸಿದೆ.

2. **ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:-**

ಮಂಡಳಿಯು ಮೂಲಕ ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳ ಸೌಲಭ್ಯಗಳು ಈ ಕೆಳಗಿನಂತಿವೆ:-

(1) ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:-

ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರಿಗೆ ಸಂಬಂಧಪಟ್ಟಂತೆ ಯೋಜನೆಯಡಿ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.

(ಅ) **ಅಪಘಾತ ಪರಿಹಾರ ಸೌಲಭ್ಯ** : ಯೋಜನೆಯಡಿ, ಅಪಘಾತದಿಂದಾದ ಮರಣ ಹೊಂದಿದ ಪ್ರಕರಣಗಳಲ್ಲಿ ರೂ. 5 ಲಕ್ಷ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಪ್ರಕರಣಗಳಲ್ಲಿ ರೂ.2 ಲಕ್ಷದ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.1 ಲಕ್ಷದವರೆಗೂ ಚಿಕಿತ್ಸಾ ವೆಚ್ಚದ ಮರುಪಾವತಿ ನೀಡಲಾಗುತ್ತಿದೆ.

ಈ ಯೋಜನೆಯಡಿ ರಾಮನಗರ ಜಿಲ್ಲೆಯಲ್ಲಿ ಈವರೆಗೆ ಒಟ್ಟು 29 ಪ್ರಕರಣಗಳಲ್ಲಿ ರೂ. **1,20,50,000/-** ಪರಿಹಾರ ಮೊತ್ತವನ್ನು ವಿತರಿಸಲಾಗಿದ್ದು, ತಾಲ್ಲೂಕುವಾರು ವಿವರ ಈ ಕೆಳಗಿನಂತಿದೆ:-

| ರಾಮನಗರ ಜಿಲ್ಲೆ | | |
|---|---|---|
| ತಾಲ್ಲೂಕು | ಒಟ್ಟು ಪ್ರಕರಣ | ಒಟ್ಟು ಪರಿಹಾರದ ಮೊತ್ತ |
| ಚನ್ನಪಟ್ಟಣ | 7 | 32,00,000 |
| ಕನಕಪುರ | 11 | 50,50,000 |
| ಮಾಗಡಿ | 3 | 15,00,000 |
| ರಾಮನಗರ | 7 | 23,00,000 |
| ಒಟ್ಟು | **29** | **1,20,50,000** |

(ಆ) **ಶೈಕ್ಷಣಿಕ ಧನ ಸಹಾಯ** : ಅಪಘಾತದ ಕಾರಣ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಇಬ್ಬರು ಮಕ್ಕಳಿಗೆ ಪದವಿ ಪೂರ್ವ ವ್ಯಾಸಂಗದವರೆಗೆ ವಾರ್ಷಿಕ ರೂ.10,000/-ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ.

ರಾಮನಗರ ಜಿಲ್ಲೆಯಲ್ಲಿ ಈವರೆಗೆ ಒಟ್ಟು 14 ಮೃತ ಚಾಲಕರ ಮಕ್ಕಳಿಗೆ ಧನಸಹಾಯ ನೀಡಲಾಗಿದ್ದು, ತಾಲ್ಲೂಕುವಾರು ವಿವರ ಈ ಕೆಳಗಿನಂತಿದೆ:

| ರಾಮನಗರ ಜಿಲ್ಲೆ | | |
|---|---|---|
| ತಾಲ್ಲೂಕು | ಒಟ್ಟು ಪ್ರಕರಣ | ಒಟ್ಟು ಪರಿಹಾರದ ಮೊತ್ತ |
| ಚನ್ನಪಟ್ಟಣ | 03 | 30,000 |
| ಕನಕಪುರ | 06 | 60,000 |
| ರಾಮನಗರ | 05 | 50,000 |
| ಒಟ್ಟು | 14 | **1,40,000** |

(1) **ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-**

(ಅ) **"ಸ್ಮಾರ್ಟ್ ಕಾರ್ಡ್"**: ಯೋಜನೆಯಡಿ ಅಸಂಘಟಿತ ವಲಯದ 11 ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ"ರನ್ನು ನೋಂದಾಯಿಸಿ ಸ್ಮಾರ್ಟ್ ಕಾರ್ಡ್ ವಿತರಿಸಲಾಗುತ್ತಿದೆ.

ಈ ಯೋಜನೆಯಡಿ ರಾಮನಗರ ಜಿಲ್ಲೆಯಲ್ಲಿ ಈವರೆಗೆ 11 ವರ್ಗಗಳ ಅಸಂಘಟಿತ ವರ್ಗಗಳಿಗೆ ಸೇರಿದ ಒಟ್ಟು 1,887 ಕಾರ್ಮಿಕರನ್ನು ನೋಂದಾಯಿಸಲಾಗಿದ್ದು, ತಾಲ್ಲೂಕುವಾರು ವಿವರ ಈ ಕೆಳಗಿನಂತಿದೆ.

| ರಾಮನಗರ ಜಿಲ್ಲೆ | | |
|---|---|---|
| ಕ್ರಮ ಸಂಖ್ಯೆ | ತಾಲ್ಲೂಕು | ನೋಂದಾಯಿತರ ಸಂಖ್ಯೆ |
| 1. | ಚನ್ನಪಟ್ಟಣ | 679 |
| 2. | ಕನಕಪುರ | 290 |
| 3. | ಮಾಗಡಿ | 227 |
| 4. | ರಾಮನಗರ | 691 |
| ಒಟ್ಟು | | **1,887** |

3. <u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:-</u>
ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.

1) ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ
2) ಕಾರ್ಮಿಕರಿಗೆ ವೈದ್ಯಕೀಯ ನೆರವು
3) ಕಾರ್ಮಿಕರಿಗೆ ಅಪಘಾತ ಧನ ಸಹಾಯ
4) ಹೆರಿಗೆ ಭತ್ಯೆ ಸೌಲಭ್ಯ
5) ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ
6) ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ಸಂಸ್ಥೆಗಳಿಗೆ ಧನಸಹಾಯ
7) ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ

ಕಳೆದ ಮೂರು ವರ್ಷಗಳಲ್ಲಿ ರಾಮನಗರ ಜಿಲ್ಲೆಯಲ್ಲಿ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯಿಂದ ವಿವಿಧ ಕಲ್ಯಾಣ ಯೋಜನೆಗಳಡಿಯಲ್ಲಿ ಧನ ಸಹಾಯ ನೀಡಲಾಗಿದೆ. ವಿವರಗಳು ಈ ಕೆಳಕಂಡಂತಿದೆ.

| ವರ್ಷ | ಫಲಾನುಭವಿಗಳು | ಮೊತ್ತ |
|---|---|---|
| 2018-19 | 659 | 25,74,000 |
| 2019-20 | 912 | 34,07,000 |
| 2020-21 | 221 | 9,37,000 |

ತಾಲ್ಲೂಕುವಾರು ವಿವರಗಳು ಲಭ್ಯವಿರುವುದಿಲ್ಲ.

ಕಾಇ 373 ಎಲ್ಇಟಿ 2021

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು

# ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 510 (513)

## ಅನುಬಂಧ-1

**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದ ನೋಂದಾಯಿತ ಫಲಾನುಭವಿಗಳಿಗೆ ಸಿಗುವ ಸೌಲಭ್ಯಗಳು**

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ.2,000/-
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ / ಪತ್ನಿ ಮಾಸಿಕ ರೂ.1000/-
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃ ಅಂಗವಿಕಲತೆ ಹೊಂದಿದ್ದರೆ ಮಾಸಿಕ ರೂ.2,000/- ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ ರೂ.2,00,000/- ದವರೆಗೆ ಅನುಗ್ರಹ ರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ ( ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
5. ~~ಟ್ರೈನಿಂಗ್-ಕಮ್-ಟೂಲ್‌ಕಿಟ್-ಸೌಲಭ್ಯ (ಶ್ರಮ ಸಾಮರ್ಥ್ಯ) : ರೂ.30,000/- ವರೆಗೆ~~
6. **ಶ್ರಮ ಸಂಸಾರ ಸಾಮರ್ಥ್ಯ ತರಬೇತಿ ಸೌಲಭ್ಯ:** ನೋಂದಾಯಿತ ಫಲಾನುಭವಿಯ ಅವಲಂಭಿತರಿಗೆ ( ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
7. **ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ):** ರೂ.2,00,000/- ದವರೆಗೆ ಮುಂಗಡ ಸೌಲಭ್ಯ
8. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಕ್ಕಳಿಗೆ ಹೆಣ್ಣು ಮಗುವಿನ ಜನನಕ್ಕೆ ರೂ. 30,000/- ಮತ್ತು ಗಂಡು ಮಗುವಿನ ಜನನಕ್ಕೆ ರೂ.20,000/-
9. **ಶಿಶು ಪಾಲನಾ ಸೌಲಭ್ಯ:**
10. **ಅಂತ್ಯಕ್ರಿಯೆ ವೆಚ್ಚ :** ರೂ.4,000/- ಹಾಗೂ ಅನುಗ್ರಹ ರಾಶಿ ರೂ.50,000/-ಸಹಾಯಧನ
11. **ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ):** ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:

| ಕ್ರ.ಸಂ | ತರಗತಿ (ಉತ್ತೀರ್ಣಕ್ಕೆ) | |
|---|---|---|
| 1 | ಕೆಜಿ/ ಪೂರ್ವ ಶಾಲೆ /ನರ್ಸರಿ (ವರ್ಷ 3 ರಿಂದ 5) | 5,000 |
| 2 | 1 ರಿಂದ 4ನೇ ತರಗತಿ | 5,000 |
| 3 | 5 ರಿಂದ 8ನೇ ತರಗತಿ | 8,000 |
| 4 | 9 ಹಾಗೂ 10ನೇ ತರಗತಿ | 12,000 |
| | ಪದವಿ ಪೂರ್ವ | |
| 5 | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | 15,000 |
| 6 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 20,000 |
| 7 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್ ಪ್ಯಾರಮೆಡಿಕಲ್ ಕೋರ್ಸ್ | 40,000 |
| 8 | ಡಿ.ಎಡ್ | 25,000 |
| | ಬಿ.ಎಡ್ | 35,000 |
| 9 | ಪದವಿ ಪ್ರತಿ ವರ್ಷಕ್ಕೆ (ಯಾವುದೇ ಪದವಿ) | 25,000 |
| 10 | ಎಲ್‌ಎಲ್‌ಬಿ / ಎಲ್‌ಎಲ್‌ಎಮ್ | 30,000 |
| 11 | ಸ್ನಾತಕೋತ್ತರ ಪದವಿ ಸೇರ್ಪಡೆಗೆ | 35,000 ಗರಿಷ್ಠ 2 ವರ್ಷ ಅವಧಿಗೆ ಒಳಪಟ್ಟು |

| | | |
|---|---|---|
| ತಾಂತ್ರೀಕ/ ವೈದ್ಯಕೀಯ ಎನ್‌ಇಇಟಿ ಅಥವಾ ಕೆಸಿಇಟಿ | | |
| 12 | ಬಿಇ / ಬಿ.ಟೆಕ್ ಅಥವಾ ಸಂಬಂಧಪಟ್ಟ ಯೂಜಿ ಕೋರ್ಸ್ | ಸದರಿ ಕೋರ್ಸ್‌ನ ಗರಿಷ್ಠ 2 ವರ್ಷ ಅವಧಿಗೆ ಒಳಪಟ್ಟು ವಾರ್ಷಿಕ ರೂ.50,000 |
| 13 | ಎಮ್.ಟೆಕ್/ ಎಮ್ ಇ ( ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರ ಕೋರ್ಸ್) | ಸದರಿ ಕೋರ್ಸ್‌ನ ಗರಿಷ್ಠ ಅವಧಿಗೆ ಒಳಪಟ್ಟು ವಾರ್ಷಿಕ ರೂ. 60,000 |
| 14 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್ಎಸ್ / ಬಿಡಿಎಸ್ /ಬಿಹೆಚ್‌ಎಮ್ಎಸ್ ಕೋರ್ಸ್‌ಗೆ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರ ಕೋರ್ಸ್ | ರೂ.60,000 (ಸದರಿ ಕೋರ್ಸ್‌ನ ಗರಿಷ್ಠ ಅವಧಿಗೆ ಒಳಪಟ್ಟು ) |
| | ಎಮ್‌ಡಿ | ರೂ. 75,000 (ಸದರಿ ಕೋರ್ಸ್‌ನ ಗರಿಷ್ಠ ಅವಧಿಗೆ ಒಳಪಟ್ಟು) |
| 15 | ಪಿಹೆಚ್‌ಡಿ / ಎಮ್. ಫಿಲ್ (ಯಾವುದೇ ವಿಷಯ) | ಪಿಹೆಚ್‌ಡಿಗೆ ಗರಿಷ್ಠ ಮೂರು ವರ್ಷಗಳಿಗೆ ಹಾಗೂ ಎಮ್‌ಫಿಲ್‌ಗೆ 1 ವರ್ಷಕ್ಕೆ ಪ್ರತಿ ವರ್ಷ ರೂ. 25,000 (ಯೂಜಿಸಿಯ ಜೂನಿಯರ್ ರಿಸರ್ಚ್ ಫೆಲೋಶಿಫ್‌ಗೆ ಆಯ್ಕೆಯಾಗಿರುವ ಅಭ್ಯರ್ಥಿಗಳು ಕೇಂದ್ರ ಮತ್ತು ರಾಜ್ಯ ಸರ್ಕಾರದಲ್ಲಿ ಕೆಲಸ ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಹಾ ಯೂಜಿಸಿ ನಿಯಮಗಳನ್ವಯ ವೇತನ ಅನುದಾನಕ್ಕೆ ಒಳಪಡುವ ಹು ಅನುದಾನಿತ ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಈ ಸೌಲಭ್ಯವನ್ನು ಪಡೆಯಲು ಅರ್ಹರಿರುವುದಿಲ್ಲ. |
| 16 | ಐಐಟಿ/ಐಐಐಟಿ/ ಐಐಎಮ್/ ಎನ್‌ಐಟಿ/ ಐಐಎಸ್‌ಇಆರ್/ ಎಐಐಎಮ್ಎಸ್ /ಎನ್‌ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸ್‌ಗಳು | ಪಾವತಿಸಿದ ಬೋಧನಾ ಶುಲ್ಕ |

12. **ವೈದ್ಯಕೀಯ ಸಹಾಯಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಬಿತರಿಗೆ ರೂ.300/- ರಿಂದ ರೂ.10,000/-ವರೆಗೆ

13. **ಅಪಘಾತ ಪರಿಹಾರ:** ಮರಣ ಹೊಂದಿದ್ದಲ್ಲಿ ರೂ.5,00,000/-, ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ ರೂ.2,00,000/- ಮತ್ತು ಭಾಗಶಃ ಶಾಶ್ವತ ದುರ್ಬಲತೆಯಾದಲ್ಲಿ ರೂ.1,00,000/-

14. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ):** ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರ ಪಿಂಡದಲ್ಲಿನ ಕಲ್ಲು ತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ ರೂ.2,00,000/-ವರೆಗೆ

15. **ಮದುವೆ ಸಹಾಯಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ ತಲಾ ರೂ.50,000/-

16. **LPG ಸಂಪರ್ಕ ಸೌಲಭ್ಯ (ಕಾರ್ಮಿಕ ಅನಿಲ ಭಾಗ್ಯ):** ಅನಿಲ ಸಂಪರ್ಕದೊಂದಿಗೆ ಎರಡು ಬರ್ನರ್ ಸ್ಟೌವ್

17. **ಬಿಎಂಟಿಸಿ ಬಸ್ ಪಾಸ್ ಸೌಲಭ್ಯ:** ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವಂತಹ / ವಾಸಸ್ಥಳದಿಂದ ಬೆಂಗಳೂರಿಗೆ ಪ್ರಯಾಣಿಸುವ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ

18. **ಕೆಎಸ್‌ಆರ್‌ಟಿಸಿ ಬಸ್ ಪಾಸ್‌ನ ಸೌಲಭ್ಯ:** ರಾಜ್ಯದಾದ್ಯಂತ ವಿದ್ಯಾಭ್ಯಾಸದಲ್ಲಿ ತೊಡಗಿರುವ ನೋಂದಾಯಿತ ಕಾರ್ಮಿಕರ ಇಬ್ಬರು ಮಕ್ಕಳಿಗೆ ( ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)

19. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ ರೂ.6,000/- ಗಳ ಸಹಾಯಧನ.

# ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 510 (513)

## ಅನುಬಂಧ-2

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದ ಕಳೆದ ಮೂರು ವರ್ಷಗಳಿಂದ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳಡಿ ರಾಮನಗರ ಜಿಲ್ಲೆಯ ಫಲಾನುಭವಿಗಳಿಗೆ ಮಂಡಳಿ ವತಿಯಿಂದ ವಿತರಿಸಿದ ತಾಲ್ಲೂಕುವಾರು ವಿವರ

| ಕ್ರಮ ಸಂಖ್ಯೆ | ತಾಲ್ಲೂಕು | ಶೈಕ್ಷಣಿಕ | ಮದುವೆ | ಹೆರಿಗೆ | ವೈದ್ಯಕೀಯ ಸಹಾಯಧನ | ಟ್ರೈನಿಂಗ್-ಕಮ್-ಟೂಲ್ ಕಿಟ್ ಸೌಲಭ್ಯ (ಶ್ರಮ ಸಾಮರ್ಥ್ಯ) | ಫಲಾನುಭವಿಗಳ ಸಂಖ್ಯೆ |
|---|---|---|---|---|---|---|---|
| 1 | ರಾಮನಗರ | 1304 | 215 | 22 | 22 | 328 | 1891 |
| 2 | ಕನಕಪುರ | 1612 | 361 | 30 | 18 | | 2021 |
| 3 | ಚನ್ನಪಟ್ಟಣ | 1068 | 255 | 9 | 24 | | 1356 |
| 4 | ಮಾಗಡಿ | 883 | 138 | 15 | 7 | | 1043 |
| | ಒಟ್ಟು | **4867** | **969** | **76** | **71** | 328 | **6311** |

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 510 (513)
ಅನುಬಂಧ-3

ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ

| Taluk | Client Name | Nominee Name | Amount | Case |
|---|---|---|---|---|
| Channapatna | Dinesh.C | Savithramma | 200000 | Death |
| | Vijayakumar | Laksmamma | 500000 | Death |
| | Lakshman T C | R .Radha | 500000 | Death |
| | S Nagendra | Jaishila | 500000 | Death |
| | Siddrajugowda A S | Pooja C | 500000 | Death |
| | D sachin | thayamma | 500000 | Death |
| | M Mutturaj | Kamajamma | 500000 | Death |
| Ramanagara | H S Putta | Girija S | 200000 | Death |
| | Murali | Asha | 200000 | Death |
| | Shankaraiah S P | Rashmi | 200000 | Death |
| | Lokesh K | Vanajeksh | 200000 | Death |
| | Chethan Kumar | Anitha | 500000 | Death |
| | Shashi kumar S T | Pankaja | 500000 | Death |
| | Nagaraju H | Pushpalatha | 500000 | Death |
| Magadi | Manjuntha | Pavither | 500000 | Death |
| | Mohan Kumar K | Kariappa | 500000 | Death |
| | H A Raju | Puttamma | 500000 | Death |
| Kanakpura | Raghavendra B.S | Tanuja G.S | 500000 | Death |
| | Sunia Gowda S P | Jayamma | 500000 | Death |
| | Ramamurthu R | Hemavithi S K | 500000 | Death |
| | M B Basavaraju | C Pavithra | 500000 | Death |
| | Sathisha | | 50000 | Medex |
| | Jayarama | sunanda | 500000 | Death |
| | Shiva kumaar | Sandhya | 500000 | Death |
| | Odesh P.M | Susmethe P.R | 500000 | Death |
| | Lokesha | Latha | 500000 | Death |
| | narasimha | Chandra | 500000 | Death |
| | Mutturaju | yashodamma | 500000 | Death |

## ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 510 (513)

### ಅನುಬಂಧ-4

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳಡಿ ರಾಮನಗರ ಜಿಲ್ಲೆಯ ಫಲಾನುಭವಿಗಳಿಗೆ ಮಂಡಳಿ ವತಿಯಿಂದ ವಿತರಿಸಿದ ತಾಲ್ಲೂಕುವಾರು ವಿವರ

| ಕ್ರಮ ಸಂಖ್ಯೆ | ತಾಲ್ಲೂಕು | ಶೈಕ್ಷಣಿಕ | ಮದುವೆ | ಹೆರಿಗೆ | ವೈದ್ಯಕೀಯ ಸಹಾಯಧನ | ಟ್ರೈನಿಂಗ್-ಕಮ್-ಟೂಲ್‌ಕಿಟ್ ಸೌಲಭ್ಯ (ಶ್ರಮ ಸಾಮರ್ಥ್ಯ) | ಫಲಾನುಭವಿಗಳ ಸಂಖ್ಯೆ |
|---|---|---|---|---|---|---|---|
| 1 | ರಾಮನಗರ | 1304 | 215 | 22 | 22 | 328 | 1891 |
| 2 | ಕನಕಪುರ | 1612 | 361 | 30 | 18 | | 2021 |
| 3 | ಚನ್ನಪಟ್ಟಣ | 1068 | 255 | 9 | 24 | | 1356 |
| 4 | ಮಾಗಡಿ | 883 | 138 | 15 | 7 | | 1043 |
| | ಒಟ್ಟು | 4867 | 969 | 76 | 71 | 328 | 6311 |